ದಿನಾಂಕ 06-03-2026 ರಂದು ಸಾಕ್ಷಿಗೆ ಪ್ರಮಾಣ ವಚನಬೋಧಿಸಿ ಪಾಟೀ ಸವಾಲಿಗೆ ಒಳಪಡಿಸಲಾಯಿತು.

**ಪಾಟೀ ಸವಾಲು :** ವಾದಿಗಳ ಪರ ಶ್ರೀ ಸಿ ವಿ ಎನ್ ವಕೀಲರಿಂದ .

ನಾನು 7 ನೇ ತರಗತಿ ವರೆಗೆ ವಿದ್ಯಾಭ್ಯಾಸ ಮಾಡಿದ್ದೇನೆ. ನನಗೆ ಓದಲು ಬರೆಯಲು ಬರುತ್ತದೆ. ನನ್ನ ಮುಖ್ಯ ವಿಚಾರಣೆಯಲ್ಲಿ ಪ್ರಮಾಣ ಪತ್ರದಲ್ಲಿ ಅಂಶಗಳ ಬಗ್ಗೆ ನನಗೆ ಮಾಹಿತಿ ಇದೆ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರಕ್ಕೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ದಾವಾ ಆಸ್ತಿಯ ಸರ್ವೇ ನಂಬರ 140 ಮತ್ತು 150 ಎನ್ನುತ್ತಾರೆ. ಅವುಗಳ ಚಕ್ಕು ಬಂದಿ ನನಗೆ ಹೇಳಲು ಆಗುವುದಿಲ್ಲ. ದಾವಾ ಜಮೀನುಗಳು ನಿಮ್ಮ ತಾಯಿಗೆ ಯಾವ ವರ್ಷದಲ್ಲಿ ಮಂಜೂರು ಆದವು ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎನ್ನುತ್ತಾರೆ. ನನ್ನ ತಂದೆ ನಾನು 7 ವರ್ಷದವಳು ಇದ್ದಾಗ ಮರಣ ಹೊಂದಿರುತ್ತಾರೆ. ದಾವಾ ಆಸ್ತಿಯನ್ನು ನಮ್ಮ ತಂದೆ ಸಾಗುವಳಿ ಮಾಡುತ್ತಿದ್ದರು ಎಂದರೆ ಸರಿ. ನಿಮ್ಮ ತಂದೆ ಮರಣ ಹೊಂದಿದ್ದರಿಂದ ನಿಮ್ಮ ತಾಯಿಯ ಹೆಸರಿಗೆ ಮಂಜೂರು ಆದವು ಎಂದರೆ ಸರಿ. ನೀವು ಮತ್ತು ನಿಮ್ಮ ಚಿಕ್ಕಪ್ಪನವರು ಒಟ್ಟು ಕುಟುಂಬದಲ್ಲಿ ವಾಸವಿದ್ದೀರಿ ಎಂದರೆ ಸರಿ. ದಾವಾ ಆಸ್ತಿಗಳು ಒಟ್ಟು ಕುಟುಂಬದ ಆಸ್ತಿಗಳು ಎಂದರೆ ಸರಿ. ವಾದಿಯರು ದಾವಾ ಆಸ್ತಿಗಳಲ್ಲಿನ ತಮ್ಮ ಹಕ್ಕನ್ನು ಯಾವತ್ತೂ ಯಾರಿಗೂ ಬಿಟ್ಟುಕೊಟ್ಟಿಲ್ಲ ಎಂದರೆ ಸರಿ. ನನಗೆ ಸಾಕ್ಷ್ಯ ನುಡಿಯಲು ನನ್ನ ಅಣ್ಣನಾದ ಮಹಾದೇವ ರವರು ಕರೆದುಕೊಂಡು ಬಂದಿದ್ದಾರೆ. ಅವರ ಮಾತು ಕೇಳಿ ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ನನ್ನ ತಾಯಿಗೆ ಬರಲು ಆಗದ ಕಾರಣ ನಾನು ಸಾಕ್ಷ್ಯ ನುಡಿಯುತ್ತಿದ್ದೇನೆ ಎನ್ನುತ್ತಾರೆ. ನಿಮ್ಮ ತಾಯಿಗೆ ನ್ಯಾಯಾಲಯದ ಮುಂದೆ ಬರಲು ಯಾವುದೇ ತೊಂದರೆ ಇಲ್ಲ ಎಂದರೆ ಸಾಕ್ಷಿ

ನನ್ನ ತಾಯಿಗೆ ಅನಾರೋಗ್ಯ ಇದ್ದ ಮತ್ತು ಕಣ್ಣು ಕಾಣದ ಕಾರಣ ಬರಲು ಆಗುವುದಿಲ್ಲ ಎನ್ನುತ್ತಾರೆ. ನಿಮ್ಮ ತಾಯಿಗೆ ಅನಾರೋಗ್ಯ ಇದ್ದ ಮತ್ತು ಕಣ್ಣು ಕಾಣುವುದಿಲ್ಲ ಎಂದು ಪ್ರತಿವಾದಿ 8 ರವರ ಮಾತು ಕೇಳಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ. ವಾದಿ 1 ರವರು ನಮ್ಮ ಊರಿನಲ್ಲಿ ವಾಸವಿದ್ದಾರೆ ಎಂದರೆ ಸರಿ. ವಾದಿ 1 ರವರು ನಿಮ್ಮ ತಾಯಿಗೆ ಆರೋಗ್ಯವಾಗಿದ್ದಾರೆ ನ್ಯಾಯಾಲಯಕ್ಕೆ ಬರುವ ಸ್ಥಿತಿಯಲ್ಲಿ ಇದ್ದಾರೆ ಎಂದು ಹೇಳಿದ್ದಾರೆ ಎಂದರೆ ಸಾಕ್ಷಿ ನನ್ನ ತಾಯಿಗೆ ಅನಾರೋಗ್ಯ ಇದ್ದ ಮತ್ತು ಕಣ್ಣು ಕಾಣದ ಕಾರಣ ಬರಲು ಆಗುವುದಿಲ್ಲ ಎನ್ನುತ್ತಾರೆ. ನಿಮ್ಮ ತಾಯಿ ನ್ಯಾಯಾಲಯಕ್ಕೆ ಬಂದರೆ ಎಲ್ಲಾ ಸತ್ಯ ಸಂಗತಿಗಳು ಹೊರಬೀಳುತ್ತವೆ ಎಂಬ ಕಾರಣದಿಂದ ನೀವು ಮತ್ತು ಪ್ರತಿವಾದಿಯರು ನಿಮ್ಮ ತಾಯಿಗೆ ಅನಾರೋಗ್ಯ ಇದೆ ಎಂದು ಸುಳ್ಳು ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ. ವಾದಿಯರು ಮತ್ತು ನಾವು ಮಾತು ಬಿಟ್ಟಲ್ಲ ಮಾತನಾಡುತ್ತೇವೆ ಎನ್ನುತ್ತಾರೆ. ನಿಮ್ಮ ಹಿಸ್ಸೆಯನ್ನು ಪಡೆದುಕೊಂಡಿದ್ದೀರಾ ಎಂದರೆ ಸಾಕ್ಷಿ ಇಲ್ಲ ಎನ್ನುತ್ತಾರೆ. ಪ್ರತಿವಾದಿಯರಿಗೆ ನಿಮ್ಮ ಹಿಸ್ಸೆಯನ್ನು ಬಿಟ್ಟುಕೊಟ್ಟಿದೀರಾ ಎಂದರೆ ಇಲ್ಲ ಎನ್ನುತ್ತಾರೆ. ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿನ ಮಾಹಿತಿ ಇಲ್ಲದಿದ್ದರೂ ಸಹ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ. ದಾವಾ ಆಸ್ತಿಗಳಲ್ಲಿ ವಾಟಣಿ ಆಗಿಲ್ಲ ಎಂದರೆ ಸರಿ. ಪ್ರತಿವಾದಿ 8 ರವರ ಮಾತು ಕೇಳಿ ಸುಳ್ಳು ಸಾಧನೆ ಮಾಡುತ್ತಿದ್ದೀರಿ ಎಂದರೆ ಸರಿಯಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

ಓ.ಹೇ.ಕೇ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾದಂ., ಹಳಿಯಾಳ.